ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-560001.**

ಸಂಖ್ಯೆ.:ಸಿ7[2] ಪ್ರಾಶಿಅ.ಖಾ.ಶಾಲಾ.ಮ.ದಾ.& ಶುಲ್ಕ. 03/2021-22 ದಿನಾಂಕ:04-06-2021

## ಸುತ್ತೋಲೆ

ವಿಷಯ: ಖಾಸಗಿ ಅನುದಾನಿತ /ಅನುದಾನರಹಿತ ಶಾಲೆಗಳಲ್ಲಿ 2021-22ನೇ ಶೈಕ್ಷಣಿಕ ಸಾಲಿಗೆ ದಾಖಲಾತಿ ಮತ್ತು ಶುಲ್ಕ ಪಡೆಯುವ ಬಗ್ಗೆ.

ಉಲ್ಲೇಖ: 1. ಕರ್ನಾಟಕ ಶಿಕ್ಷಣ ಕಾಯ್ದೆ-1983 ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯಕ್ರಮ ನಿಗದಿ ಇತ್ಯಾದಿ) ನಿಯಮಗಳು-1995

2. ಉಚಿತ ಮತ್ತು ಕಡ್ಡಾಯ ಶಿಕ್ಷಣ ಕಾಯ್ದೆ-2009 ನಿಯಮಗಳು-2012
3. ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ.31.ಪಿಜಿಸಿ.2019, ದಿನಾಂಕ:24-7-2019
4. ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿ4[6] ಶೈ ಮತ್ತು ರಜೆ.ಅ.ನಿಗಧಿ.35/2020-21 ದಿನಾಂಕ:20-4-2021 ಮತ್ತು 31-05-2021.
5. ಈ ಕಛೇರಿ ಸುತ್ತೋಲೆ ಸಂಖ್ಯೆ: ಎಡಿಎಂ2(1)ಶೈ.ವ.ನಿ-01/2021-22. ದಿನಾಂಕ: 04-06-2021..

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಸಾಮಾನ್ಯ ವರ್ಷಗಳಲ್ಲಿ ಉಲ್ಲೇಖ[1]ರ ಅನ್ವಯ ಖಾಸಗಿ ಅನುದಾನಿತ / ಅನುದಾನರಹಿತ ಶಾಲೆಗಳಲ್ಲಿ ಪ್ರತಿ ಶೈಕ್ಷಣಿಕ ವರ್ಷದ ಹೊಸ ದಾಖಲಾತಿ ಪ್ರಕ್ರಿಯೆಯು ಈಗ ಪ್ರಾರಂಭವಾಗುತ್ತಿತ್ತು. ಆದರೆ ಕೋವಿಡ್-19 ಮುಂದುವರೆದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಶಾಲಾ ಕಾಲೇಜುಗಳನ್ನು ನಿಗದಿತ ಸಮಯಕ್ಕೆ ಪ್ರಾರಂಭಿಸಲು ಸಾಧ್ಯವಾಗಿರುವುದಿಲ್ಲ. ಭೌತಿಕವಾಗಿ ಶಾಲೆಗಳ ಪುನರಾರಂಭದ ಕುರಿತು ಅನಿಶ್ಚಿತತೆ ಇರುವುದರಿಂದ ಮಕ್ಕಳನ್ನು ಪರ್ಯಾಯ ಮಾರ್ಗವಾಗಿ ಸಂಪರ್ಕಿಸಿ ಶೈಕ್ಷಣಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕಾಗಿರುತ್ತದೆ.

ಪ್ರಸ್ತುತ ಸನ್ನಿವೇಶದಲ್ಲಿ ಮಕ್ಕಳನ್ನು ಪರ್ಯಾಯ ಮಾರ್ಗಗಳ ಮೂಲಕ ಶೈಕ್ಷಣಿಕ ಚಟುವಟಿಕೆಯಲ್ಲಿ ತೊಡಗಿಸದೇ ಇದ್ದಲ್ಲಿ ಅವರು ಕಲಿಕೆಯಲ್ಲಿ ಆಸಕ್ತಿಯನ್ನು ಕಳೆದುಕೊಳ್ಳುವ ಸಂಭವವಿದ್ದು ಶಾಲೆಯಿಂದ ಹೊರಗುಳಿಯುವ ಸಾಧ್ಯತೆ ಇರುತ್ತದೆ. ಇಂತಹ ಕೆಲವು ಮಕ್ಕಳು ಬಾಲ ಕಾರ್ಮಿಕತೆ, ಬಾಲ್ಯವಿವಾಹ ಅಥವಾ ದುಶ್ಚಟಗಳಿಗೆ ಗುರಿಯಾಗುವ ಸಂಭವವಿರುತ್ತದೆ. ಆದುದರಿಂದ ಎಲ್ಲಾ ಮಕ್ಕಳನ್ನು ಶೈಕ್ಷಣಿಕ ಚಟುವಟಿಕೆಯಲ್ಲಿ ತೊಡಗಿಸಿ ಅವರಿಗೆ ಮನೋಸ್ಥೈರ್ಯವನ್ನು ಹೆಚ್ಚಿಸುವ ಹಾಗೂ ನಿರಂತರ ಕಲಿಕೆಯಲ್ಲಿ ತೊಡಗಿಸಿಕೊಳ್ಳುವಂತೆ ಮಾಡುವುದು ಅತ್ಯವಶ್ಯಕವಾಗಿದೆ.

ಆದುದರಿಂದ ಪ್ರಸ್ತುತ ಉಲ್ಲೇಖ-05 ರಂತೆ 2021-22ನೇ ಸಾಲಿನ ಶೈಕ್ಷಣಿಕ ವರ್ಷದ ವಾರ್ಷಿಕ ಯೋಜನೆಯಂತೆ ಜುಲೈ-01 ರಿಂದ ಶಾಲೆಗಳನ್ನು ಪ್ರಾರಂಭಿಸುವ ಬಗ್ಗೆ ಯೋಜಿಸಿದ ಹಿನ್ನೆಲೆಯಲ್ಲಿ ಮಕ್ಕಳ ಶಾಲಾ ಪ್ರವೇಶ ದಾಖಲಾತಿ ಪ್ರಕ್ರಿಯೆಯನ್ನು ಕೆಳಕಂಡಂತೆ ಪ್ರಾರಂಭಿಸುವುದು.

ಶಾಲಾ ದಾಖಲಾತಿಗೆ ತರಗತಿವಾರು ಲಭ್ಯವಿರುವ ಸೀಟುಗಳ ಸಂಖ್ಯೆ, ಪ್ರವೇಶ ಪ್ರಕ್ರಿಯೆ ಪ್ರಕಟಣೆ, ತರಗತಿವಾರು ಪಾವತಿಸಬೇಕಾದ ಶುಲ್ಕದ ವಿವರಗಳನ್ನು ಒಳಗೊಂಡಂತೆ ಶಾಲಾ ಪ್ರವೇಶಕ್ಕೆ ಪೂರಕ ಮಾಹಿತಿಗಳನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ, ದಾಖಲಾತಿ ಪ್ರಕ್ರಿಯೆಯನ್ನು ಜೂನ್-15 ರಿಂದ ಪ್ರಾರಂಭಿಸಿ ಆಗಸ್ಟ್-31 ರೊಳಗೆ ಮುಕ್ತಾಯಗೊಳಿಸುವುದು. ದಾಖಲಾತಿಗಾಗಿ ಶಾಲೆಯ ಆವರಣದಲ್ಲಿ ಮಕ್ಕಳು ಹಾಗೂ ಪೋಷಕರನ್ನು ಒಗ್ಗೂಡಿಸದಂತೆ ಕೋವಿಡ್-19ರ ಸುರಕ್ಷತಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿ ದಾಖಲಾತಿ ಮುಂದುವರೆಸುವುದು ಹಾಗೂ ಶಾಲೆಗಳಲ್ಲಿ ತರಗತಿಗಳನ್ನು ಭೌತಿಕವಾಗಿ ಮುಂದಿನ ಆದೇಶದವರೆಗೆ ಪ್ರಾರಂಭಿಸಬಾರದೆಂದು ಸೂಚಿಸಿದೆ.

ಒಂದು ವೇಳೆ ಶಾಲೆಗಳಲ್ಲಿ ತರಗತಿಗಳನ್ನು ಮಕ್ಕಳಿಗೆ ಭೌತಿಕವಾಗಿ ಪ್ರಾರಂಭಿಸಲು ಸಾಧ್ಯವಾಗದಿದ್ದಲ್ಲಿ ಪರ್ಯಾಯ ಶಿಕ್ಷಣ ಮುಖೇನ ಅಂದರೆ ತರಗತಿವಾರು ಆನ್-ಲೈನ್ / ಆಫ್-ಲೈನ್ ಶಿಕ್ಷಣವನ್ನು, ದೂರದರ್ಶನ, ಸಂವೇದ, ಬಾನುಲಿ, ಯೂಟ್ಯೂಬ್, ವಾಟ್ಸಾಪ್, ಡೆಸ್ಕ್ ಟಾಪ್, ಟ್ಯಾಬ್, ಮೊಬೈಲ್ ಇತರ ವಿದ್ಯುನ್ಮಾನ ಸಾಮಗ್ರಿಗಳ ಮುಖೇನ ಮುದ್ರಿತ ಪಾಠಗಳನ್ನು ಪ್ರಸಾರ ಮಾಡುವುದು, ಅಗತ್ಯಾನುಸಾರ ದೀಕ್ಷಾ ಪೋರ್ಟಲ್ ನಲ್ಲಿ ಲಭ್ಯವಿರುವ ಪಾಠಗಳನ್ನು / ಚಟುವಟಿಕೆಗಳನ್ನು ಮತ್ತು ವರ್ಕ್ ಬುಕ್ / ವರ್ಕ್ ಶೀಟ್ ಮತ್ತು ಸ್ವಕಲಿಕೆ ಸಾಮಗ್ರಿ ಬಳಸಿಕೊಂಡು ಬೋಧನಾ ಕಲಿಕಾ ಪ್ರಕ್ರಿಯೆಯನ್ನು ಮುಂದುವರೆಸುವುದು. ಈ ಕುರಿತು ಇಲಾಖೆ (ಡಿ.ಎಸ್.ಇ.ಆರ್.ಟಿ) ಯಿಂದ ಹೊರಡಿಸಿದ ಸುತ್ತೋಲೆಯನ್ನು ಗಮನಿಸುವುದು.

ಈ ಮೇಲ್ಕಂಡಂತೆ 2021-22 ನೆ ಸಾಲಿನ ಶೈಕ್ಷಣಿಕ ವರ್ಷದ ಚಟುವಟಿಕೆಗಳನ್ನು ಪ್ರಾರಂಭಿಸಲು ಸೂಚಿಸಿದೆ. ಮುಂದುವರೆದು, ಕೋವಿಡ್-19 ರ ಹಿನ್ನಲೆಯಲ್ಲಿ ಕಾಲಕಾಲಕ್ಕೆ ಸರ್ಕಾರ / ಇಲಾಖೆ ಹೊರಡಿಸುವ ಮಾರ್ಗಸೂಚಿಗಳಂತೆ ಆಗಬಹುದಾದ ಬದಲಾವಣೆಗಳಿಗೆ ಈ ಆದೇಶ ಒಳಪಟ್ಟಿರುತ್ತದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) & (ಅಭಿವೃದ್ಧಿ) ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ ಮತ್ತು ಮಾಧ್ಯಮ ಮತ್ತು ಸಾಮಾಜಿಕ ಜಾಲತಾಣಗಳ ಮೂಲಕ ವ್ಯಾಪಕ ಪ್ರಚಾರ ನೀಡುವುದರ ಮೂಲಕ ತಮ್ಮ ವ್ಯಾಪ್ತಿಯಲ್ಲಿನ ಶಾಲೆಗಳ ಮುಖ್ಯಸ್ಥರ ಗಮನಕ್ಕೆ ತರುವುದು.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಖಾಸಗಿ ಅನುದಾನರಹಿತ ಶಾಲೆಗಳ ಆಡಳಿತ ಮಂಡಳಿ ಮತ್ತು ಮುಖ್ಯ ಶಿಕ್ಷಕರ ಸೂಕ್ತ ಕ್ರಮಕ್ಕಾಗಿ ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ.

ಪ್ರತಿಯನ್ನು ಮಾಹಿತಿಗಾಗಿ:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ಸಲ್ಲಿಸಿದೆ.
2. ಅಪರ ಆಯುಕ್ತರು, ಕಲಬುರ್ಗಿ ಮತ್ತು ಧಾರವಾಡ, ಸಾರ್ವಜನಿಕ ಶಿಕ್ಷಣ ಇಲಾಖೆ.
3. ಇಲಾಖೆಯ ಎಲ್ಲಾ ನಿರ್ದೇಶಕರಿಗೆ.
4. ಕಛೇರಿ ಪ್ರತಿ.